ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಹೇಳಿಕೆ

-- • --

## ವಿಷಯ

ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಸೋಮನಹಳ್ಳಿ ಕೈಗಾರಿಕಾ ಪ್ರದೇಶದ ವ್ಯಾಪ್ತಿಯಲ್ಲಿನ ಸರ್ವೆ ನಂ.29 ರಲ್ಲಿ ಕೆ.ಐ.ಎ.ಡಿ.ಬಿ. ಅನುಮತಿ ಇಲ್ಲದೇ ಅಕ್ರಮವಾಗಿ ಖಾಸಗಿ ಮಾಲೀಕತ್ವದಲ್ಲಿ ಬಡಾವಣೆ ನಿರ್ಮಾಣ ಮಾಡುತ್ತಿರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯಬಯಸುತ್ತೇನೆ.

## ಉತ್ತರ

ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಸೋಮನಹಳ್ಳಿ ಕೈಗಾರಿಕಾ ಪ್ರದೇಶಕ್ಕಾಗಿ ಸೋಮನಹಳ್ಳಿ ಗ್ರಾಮದ ಸರ್ವೆ ನಂ: 29 ರಲ್ಲಿನ 3-16 ಎಕರೆ ಸರ್ಕಾರಿ ಜಮೀನು ಒಳಗೊಂಡಂತೆ ಒಟ್ಟು 15-23 ಎಕರೆ ಜಮೀನನ್ನು ಭೂಸ್ವಾಧೀನಪಡಿಸಲು ದಿನಾಂಕ: 15.11.1994ರಂದು ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ.

ಸದರಿ ಜಮೀನನ್ನು ಮಂಡಳಿಗೆ ಮಂಜೂರು ಮಾಡುವ ಸಂಬಂಧ ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ಇವರು ದಿನಾಂಕ: 24.11.2000ರಂದು ಹೊರಡಿಸಿರುವ ಅಧಿಕೃತ ಜ್ಞಾಪನ ಪತ್ರದಲ್ಲಿ ತಿಳಿಸಿರುವಂತೆ, ಪ್ರಸ್ತಾವಿತ ಜಮೀನಿನ ಮಾರುಕಟ್ಟೆ ಬೆಲೆ, ಪರಿವರ್ತನಾ ಶುಲ್ಕ ಮತ್ತು ಪೋಡಿ ಶುಲ್ಕ ಸೇರಿ ಒಟ್ಟು ರೂ.2,37,239/-ಗಳನ್ನು ದಿನಾಂಕ: 29.10.2004ರಂದು ತಹಶೀಲ್ದಾರ್, ಮದ್ದೂರು ತಾಲ್ಲೂಕು ಇವರಿಗೆ ಜಮಾ ಮಾಡಲಾಗಿದೆ.

ಈ ಸರ್ಕಾರಿ ಜಮೀನು ಮಂಡಳಿಗೆ ಮಂಜೂರಾಗಿದ್ದು, ಭೌತಿಕವಾಗಿ ಕೆ.ಐ.ಎ.ಡಿ.ಬಿ.ಗೆ ಹಸ್ತಾಂತರಿಸುವಂತೆ ವಿಶೇಷ ಭೂಸ್ವಾಧೀನಾಧಿಕಾರಿ, ಮೈಸೂರು ಇವರು ತಹಶೀಲ್ದಾರ್, ಮದ್ದೂರು ಇವರಿಗೆ ಬರೆದ ದಿನಾಂಕ: 06.11.2019ರ ಪತ್ರದಲ್ಲಿ ಕೋರಲಾಗಿದೆ. ಸದರಿ ಜಮೀನು ಕಂದಾಯ ಇಲಾಖೆಯಿಂದ ಭೌತಿಕವಾಗಿ ಮಂಡಳಿಗೆ ಹಸ್ತಾಂತರವಾಗಲು ಬಾಕಿಯಿದ್ದು, ಸದರಿ ಜಮೀನಿನಲ್ಲಿ ಅಕ್ರಮವಾಗಿ ಬಡಾವಣೆ ನಿರ್ಮಾಣವಾಗುವುದನ್ನು ತಡೆಯುವಂತೆ ಕಂದಾಯ ಇಲಾಖೆಯನ್ನು ಕೋರಲು ಕ್ರಮ ವಹಿಸಲಾಗುತ್ತಿದೆ.

ಸಂಖ್ಯೆ: ಸಿಐ 212 ಐಎಪಿ (ಇ) 2021

(ಮುರುಗೇಶ್ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಹೇಳಿಕೆ

-- • --

### ವಿಷಯ

ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಸೋಮನಹಳ್ಳಿ ಕೈಗಾರಿಕಾ ಪ್ರದೇಶದ ಹಲವು ಕೈಗಾರಿಕೆಗಳು ಲೀಸ್ ಕಂ ಸೇಲ್ ಡೀಡ್ ಕರಾರಿನನ್ವಯ 15 ರಿಂದ 20 ವರ್ಷಗಳಾಗಿದ್ದರೂ ಇದುವರೆವಿಗೂ ಕೈಗಾರಿಕೆ ಪ್ರಾರಂಭಿಸದೇ ಇರುವುದು ಹಾಗೂ ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಿಕೊಳ್ಳದೇ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯಬಯಸುತ್ತೇನೆ.

### ಉತ್ತರ

ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಸೋಮನಹಳ್ಳಿ ಕೈಗಾರಿಕಾ ಪ್ರದೇಶವನ್ನು 1975ನೇ ಸಾಲಿನಲ್ಲಿ 155.30 ಎಕರೆ ವಿಸ್ತೀರ್ಣದ ಜಮೀನಿನಲ್ಲಿ ಅಭಿವೃದ್ಧಿಪಡಿಸಿದ್ದು, ಈ ಪೈಕಿ ಹಂಚಿಕೆಗೆ ಲಭ್ಯವಿದ್ದ 135 ಎಕರೆ ಜಮೀನನ್ನು 97 ಘಟಕಗಳಿಗೆ ಹಂಚಿಕೆ ಮಾಡಲಾಗಿದೆ. ಈ ಪೈಕಿ 88 ಘಟಕಗಳು ಹಂಚಿಕೆಯಾದ ಜಮೀನನ್ನು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಿಕೊಂಡು ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಅದರಂತೆ 81 ಘಟಕಗಳಿಗೆ ಶುದ್ಧ ಕ್ರಯಪತ್ರ ಮಾಡಿಕೊಡಲಾಗಿದೆ.

ಉಳಿದ 9 ಘಟಕಗಳ ಪೈಕಿ, ಪ್ರಸ್ತುತ 4 ಘಟಕಗಳು ಸ್ಥಗಿತಗೊಂಡಿದ್ದು, 5 ಘಟಕಗಳು ನಿಗದಿತ ಅವಧಿಯೊಳಗೆ ಹಂಚಿಕೆಯಾದ ಜಮೀನಿನಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಫಲರಾದ ಹಿನ್ನೆಲೆಯಲ್ಲಿ, ಕೆ.ಐ.ಎ.ಡಿ. ಕಾಯ್ದೆ 1966 ರನ್ವಯ ಕಲಂ 34-ಬಿ ನೋಟಿಸನ್ನು ಜಾರಿ ಮಾಡಿದ್ದು, ಸದರಿ ಪ್ರಕರಣಗಳು ವಿಚಾರಣಾ ಹಂತದಲ್ಲಿವೆ.

ಸಂಖ್ಯೆ: ಸಿಐ 210 ಐಎಪಿ (ಇ) 2021

(ಮುರುಗೇಶ್ ಆರ್ ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು